39

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ-330ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

**ವಿಷಯ:-**

ಅನುದಾನಿತ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ ಹಾಗೂ ಇನ್ನಿತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ದೀರ್ಘ ಕಾಲದಿಂದ ಭರ್ತಿ ಮಾಡದೆ ಇರುವುದರಿಂದ ಶೈಕ್ಷಣಿಕ ಪ್ರಗತಿ ಕುಂಠಿತವಾಗಿರುವ ಗಂಭೀರ ಸಮಸ್ಯೆ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

**ಅನುದಾನಿತ ಪ್ರಾಥಮಿಕ:**

ಸರ್ಕಾರದ ಸುತ್ತೋಲೆ ಸಂಖ್ಯೆ : ಇಡಿ 112 ಪಿಎಂಸಿ 99, ದಿನಾಂಕ : 01/06/1999ರಲ್ಲಿ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ವಿವಿಧ ಕಾರಣಗಳಿಂದ ಖಾಲಿಯಾಗಿರುವ ಹಾಗೂ ಖಾಲಿಯಾಗುವ ಸಹ ಶಿಕ್ಷಕ ವೃಂದ/ದೈಹಿಕ ಶಿಕ್ಷಣ ಶಿಕ್ಷಕ ವೃಂದದ ಹುದ್ದೆಗಳನ್ನು ಕಾರ್ಯಭಾರವಿಲ್ಲದ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿನ ಹೆಚ್ಚುವರಿ ಸಿಬ್ಬಂದಿಗಳನ್ನು ಅಗತ್ಯವಿರುವ ಹಾಗೂ ಕಾರ್ಯಭಾರವಿರುವ ಶಾಲೆಗಳಿಗೆ ನಿಯಮಾನುಸಾರ ಹಂಚಿಕೆ ಮಾಡುವ ಮೂಲಕ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ 498 ಹುದ್ದೆಗಳು ಹೆಚ್ಚುವರಿ ಇರುವುದರಿಂದ, ಭರ್ತಿ ಮಾಡುವ ಪ್ರಮೇಯ ಉದ್ಭವಿಸುವುದಿಲ್ಲ.

**ಅನುದಾನಿತ ಪ್ರೌಢ:**

ಸರ್ಕಾರದ ಆದೇಶ ಸಂಖ್ಯೆ : ಇಡಿ 14 ಎಸ್‌ಇಪಿ 2017, ದಿನಾಂಕ : 25/09/2018ರಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ : 31/12/2015ರವರೆಗೆ ನಿಧನ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾದ ಬೋಧಕ (ಸಹ ಶಿಕ್ಷಕ ವೃಂದ) ಹಾಗೂ ದೈಹಿಕ ಶಿಕ್ಷಣ ಶಿಕ್ಷಕ (ಗ್ರೇಡ್-1) ಹುದ್ದೆಗಳನ್ನು ಆರ್ಥಿಕ ಮಿತವ್ಯಯ ಸಡಿಲಿಕೆ ಮಾಡಿ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇದರೊಂದಿಗೆ ವಿವಿಧ ಕಾರಣಗಳಿಂದಾಗಿ ಮುಚ್ಚಲ್ಪಟ್ಟ ಅನುದಾನಿತ ಪ್ರೌಢಶಾಲೆಗಳಲ್ಲಿ ಹೆಚ್ಚುವರಿಯಾಗುವ ಹಾಗೂ ಕಾರ್ಯಭಾರವಿಲ್ಲದ ಸಹ ಶಿಕ್ಷಕ ಹಾಗೂ ದೈಹಿಕ ಶಿಕ್ಷಕರನ್ನು ಗುರುತಿಸಿ ಅಗತ್ಯವಿರುವ ಹಾಗೂ ಕಾರ್ಯಭಾರವಿರುವ ಅನುದಾನಿತ ಪ್ರೌಢಶಾಲೆಗಳಿಗೆ ಹಂಚಿಕೆ ಮಾಡಲಾಗುತ್ತಿದೆ.

**ಅನುದಾನಿತ ಪದವಿ ಪೂರ್ವ:**

ಸರ್ಕಾರದ ಆದೇಶ ಸಂಖ್ಯೆ : ಇಡಿ 144 ಟಿಪಿಯು 2016, ದಿನಾಂಕ : 09/02/2017 ಮತ್ತು 12/09/2017ಗಳಲ್ಲಿ ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ಮತ್ತು ನಿಗದಿತ 20 ಗಂಟೆಗಳ ಕಾರ್ಯಭಾರವನ್ನು ಹೊಂದಿರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಮಿತವ್ಯಯವನ್ನು ಸಡಿಲಿಕೆ ಮಾಡಿ ಅನುಮತಿ ನೀಡಲಾಗಿದೆ.

ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳನ್ನು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳು ದಿನಾಂಕ : 01/01/2016ರ ನಂತರ ಖಾಲಿಯಾಗಿರುವ ಬೋಧಕ ಮತ್ತು ದೈಹಿಕ ಶಿಕ್ಷಕ ವೃಂದದ ಹುದ್ದೆಗಳನ್ನು ಆಡಳಿತ ಮಂಡಳಿಯ ಆಂತರಿಕ ಸಂಪನ್ಮೂಲ ಬಳಸಿಕೊಂಡು, ಅನುದಾನರಹಿತವಾಗಿ ಸೇವೆ ಪಡೆಯುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಧಕ್ಕೆಯುಂಟಾಗುವುದಿಲ್ಲ.

S. Su

(ಎಸ್ ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು

ಸಂಖ್ಯೆ : ಇಪಿ 92 ಎಸ್‌ಇಎಸ್ 2020